ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ವಸತಿ ಯೋಜನೆಯಡಿ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಅವಕಾಶ ಮಾಡದೇ ಇರುವ ಬಗ್ಗೆ

ಶ್ರೀಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1123 (1295) ಮಾನ್ಯ ವಸತಿ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸುವ ಕಾರ್ಯ ಮುಕ್ತಾಯವಾಗಿದೆಯೇ; ಮುಕ್ತಾಯವಾಗಿದ್ದಲ್ಲಿ, ಬೇರೆ ಬೇರೆ ಯೋಜನೆಯಡಿ 2010 ರಿಂದ ಇಲ್ಲಿಯವರೆಗೆ ಯೋಜನೆವಾರು ಆಗಿರುವ ಗುರಿ ಎಷ್ಟು; ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು; (ಯೋಜನೆವಾರು, ಜಿಲ್ಲಾವಾರು /ತಾಲ್ಲೂಕುವಾರು ವಿವರ ನೀಡುವುದು)

(ಆ) ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಕಾರವಾರ ಜಿಲ್ಲೆಯಲ್ಲಿ 2010 ರಿಂದ ಈವರೆಗೆ ಆಯ್ಕೆಯಾದ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಗಿದೆಯೇ; (ಜಿಲ್ಲಾವಾರು, ವರ್ಷವಾರು, ಫಲಾನುಭವಿವಾರು ಮಾಹಿತಿ ನೀಡುವುದು)

(ಇ) 2010 ರಿಂದ ಈವರೆಗೆ ಜಿಲ್ಲೆಯಲ್ಲಿ ವಾಜಪೇಯಿ ವಸತಿ ಯೋಜನೆಯ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿದೆ; ಈವರೆಗೆ ಅವರು ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತಾರೆ; (ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಯೋಜನೆಯನ್ನು ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ತಲುಪಿಸದೇ ಇದ್ದಲ್ಲಿ, ಹಾಗೂ ಫಲಾನುಭವಿಗಳಿಗೆ ಅವಕಾಶ ಮಾಡಿಕೊಡದೇ ಬೇರೆಯವರಿಗೆ ಅವಕಾಶ ಮಾಡಿದಂತಹ ಜವಾಬ್ದಾರಿ ಪಡೆದ ಅಧಿಕಾರಿ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ? (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ಒದಗಿಸುವುದು)